Akashvani : Bangalore
National Bulletin In Kannada
07.03.2025 / 19.35 hrs
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

- ದಿಯು-ದಮನ್‌ನಲ್ಲಿ ೨ ಸಾವಿರದ ೫೮೭ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಶಿಲಾನ್ಯಾಸ
- ಜನೌಷಧ ಕೇಂದ್ರಗಳಿಂದ ಆರೋಗ್ಯ ಸೇವೆಯಲ್ಲಿ ಕ್ರಾಂತಿಕಾರಕ ಬದಲಾವಣೆ- ಸಚಿವ ಜೆ.ಪಿ.ನಡ್ಡಾ
- ಪರಸ್ಪರ ಆರ್ಥಿಕ ವೃದ್ಧಿಗೆ ಭಾರತ-ಐರ್ಲೆಂಡ್ ವ್ಯಾಪಾರ ಸಂಬಂಧ ಸಹಕಾರಿ- ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್
- ಡಬ್ಲ್ಯುಪಿಎಲ್ ಕ್ರಿಕೆಟ್; ಇಂದು ಗುಜರಾತ್ ಜೈಂಟ್ಸ್- ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ

<><*<><>*><>

ದಿಯು, ದಮನ್‌ನ ಸಿಲ್ವಾಸಾ ಮತ್ತು ದಾದ್ರಾ ನಗರ ಹವೇಲಿಯಲ್ಲಿ ೨ ಸಾವಿರದ ೫೮೭ ಕೋಟಿ ರೂಪಾಯಿ ಮೌಲ್ಯದ ವಿವಿಧ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಉದ್ಘಾಟನೆ ಮತ್ತು ಶಿಲಾನ್ಯಾಸ ನೆರವೇರಿಸಿದರು. ಸಿಲ್ವಾಸಾದಲ್ಲಿ ೪೫೦ ಹಾಸಿಗೆಗಳ ನಮೋ ಆಸ್ಪತ್ರೆ ಮತ್ತು ಸಂಶೋಧನಾ ಕೇಂದ್ರವನ್ನು ಹಾಗೂ ಒಂದು ಸಾವಿರದ ೭೫ ಕೋಟಿ ರೂಪಾಯಿ ಮೌಲ್ಯದ ೨೫ ಯೋಜನೆಗಳನ್ನು ಪ್ರಧಾನಿ ಉದ್ಘಾಟಿಸಿದರು. ದಾಮನ್‌ನಲ್ಲಿ ೩೦೦ ಹಾಸಿಗೆಗಳ ಸಾಮರ್ಥ್ಯವಿರುವ ಮಾರ್ವಾರ್ ಆಸ್ಪತ್ರೆಯ ೪ ಬ್ಲಾಕ್‌ಗಳ ನಿರ್ಮಾಣ, ಖಾನ್ವೆಲ್‌ನಲ್ಲಿ ಜಿಲ್ಲಾ ಆಸ್ಪತ್ರೆ, ರಾಷ್ಟ್ರೀಯ ಹೆದ್ದಾರಿ ೮೪೮-ಬಿ ವಿಸ್ತರಣೆ, ೧೨ ಹೊಸ ಶಾಲೆಗಳ ನಿರ್ಮಾಣ ಹಾಗೂ ದಿಯು ಮತ್ತು ದಮನ್‌ನಲ್ಲಿ ರಸ್ತೆಗಳ ಅಭಿವೃದ್ಧಿ ಸೇರಿದಂತೆ ೧೩ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಶಿಲಾನ್ಯಾಸ ನೆರವೇರಿಸಿದರು.

ಪ್ರಧಾನಿ ನರೇಂದ್ರ ಮೋದಿ ( ೨೭ ಸೆಕೆಂಡ್‌ಗಳು)

ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಅಂಗವಾಗಿ ನಾಳೆ ನವಸಾರಿಯಲ್ಲಿ ನಡೆಯಲಿರುವ ಲಕ್ಷಾದಿಪತಿ ದೀದಿ ಸಮ್ಮೇಳನದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಲಿದ್ದಾರೆ. ೨೫ ಸಾವಿರಕ್ಕೂ ಹೆಚ್ಚು ಸ್ವ-ಸಹಾಯ ಗುಂಪುಗಳ ೨ ಲಕ್ಷದ ೫೦ ಸಾವಿರ ಮಹಿಳೆಯರಿಗೆ ೪೫೦ ಕೋಟಿ ರೂಪಾಯಿಗೂ ಹೆಚ್ಚು ಸಹಾಯಧನವನ್ನು ಅವರು ವಿತರಿಸಲಿದ್ದಾರೆ.

<><*<><>*><>

ಗುಜರಾತ್‌ನ ಸೂರತ್‌ನಲ್ಲಿಂದು ಸೂರತ್ ಆಹಾರ ಭದ್ರತಾ ಅಭಿಯಾನಕ್ಕೆ ಪ್ರಧಾನಿ ನರೇಂದ್ರ ಮೋದಿ ಚಾಲನೆ ನೀಡಿದರು. ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಸೂರತ್‌ನಲ್ಲಿ ಪ್ರಾರಂಭಿಸಲಾಗಿರುವ ಈ ಅಭಿಯಾನವು ದೇಶದ ಇತರೆ ಜಿಲ್ಲೆಗಳಿಗೂ ಸ್ಫೂರ್ತಿಯಾಗಲಿದೆ ಎಂದರು. ಆಹಾರ ಭದ್ರತಾ ಕ್ರಮಗಳ ವ್ಯಾಪ್ತಿಯನ್ನು ವಿಸ್ತರಿಸಲು ಮತ್ತು ಜನರಿಗೆ ಅಗತ್ಯವಾದ ಪೌಷ್ಟಿಕಾಂಶಗಳನ್ನು ಒದಗಿಸಲು

ಕೇಂದ್ರ ಸರ್ಕಾರ ನಡೆಸುತ್ತಿರುವ ನಿರಂತರ ಪ್ರಯತ್ನಗಳ ಒಂದು ಭಾಗವಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದರು.

<><*<><>*><>

ಜನರಿಗೆ ಉತ್ತಮ ಗುಣಮಟ್ಟದ ಹಾಗೂ ಕೈಗೆಟಕುವ ದರದಲ್ಲಿ ಔಷಧಗಳನ್ನು ಪೂರೈಸುವ ಮೂಲಕ ಜನೌಷಧ ಕೇಂದ್ರಗಳು ದಿವಸ್ ಆರೋಗ್ಯಕರ ಹಾಗೂ ಸ್ವಸ್ಥ ಭಾರತವನ್ನು ಖಾತ್ರಿ ಪಡಿಸುವಲ್ಲಿ ಸರ್ಕಾರದ ಬದ್ಧತೆಯನ್ನು ಪ್ರತಿಬಿಂಬಿಸುತ್ತಿದೆ ಎಂದು ಪ್ರಧಾನಿ ನರೇಂದ್ರಮೋದಿ ಹೇಳಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು ದೇಶದ ಮೂಲೆಮೂಲೆಗೂ ಉತ್ತಮ ಗುಣಮಟ್ಟದ ಔಷಧಿಗಳು ಕೈಗೆಟಕುವ ದರದಲ್ಲಿ ಪೂರೈಕೆಯಾಗುತ್ತಿದ್ದು ಭಾರತೀಯ ಕುಟುಂಬಗಳಿಗೆ ಉಳಿತಾಯ ಮಾಡುತ್ತಿವೆ. ಇದೀಗ ಭಾರತದ ಜನೌಷಧಿ ಇಡೀ ವಿಶ್ವಕ್ಕೆ ಮಾದರಿಯಾಗಿದೆ ಎಂದಿದ್ದಾರೆ. ಹೃದಯ ಚಿಕಿತ್ಸೆ, ಮೊಣಕಾಲಿನ ಶಸ್ತ್ರ ಚಿಕಿತ್ಸೆ, ರಾಷ್ಟ್ರೀಯ ಡಯಾಲಿಸಿಸ್ ಕಾರ್ಯಕ್ರಮಗಳಿಂದಾಗಿ ಮೂತ್ರಪಿಂಡ ರೋಗಿಗಳಿಗೂ ಚಿಕಿತ್ಸೆಯ ವೆಚ್ಚ ತಗ್ಗಿದೆ ಎಂದು ಪ್ರಧಾನಿ ಪ್ರಶಂಸಿಸಿದರು.

<><*<><>*><>

ಪ್ರಧಾನಮಂತ್ರಿ ಭಾರತೀಯ ಜನೌಷಧ ಪರಿಯೋಜನೆ, ಎಲ್ಲರಿಗೂ ಆರೋಗ್ಯ ಸೇವೆ ಲಭ್ಯವಾಗುವಂತೆ ಕ್ರಾಂತಿಕಾರಕ ಬದಲಾವಣೆ ತರುತ್ತಿದೆ ಎಂದು ಕೇಂದ್ರ ಆರೋಗ್ಯ ಸಚಿವ ಜಗತ್ ಪ್ರಕಾಶ್ ನಡ್ಡಾ ಹೇಳಿದ್ದಾರೆ. ೧೫ ಸಾವಿರಕ್ಕೂ ಹೆಚ್ಚು ಜನೌಷಧ ಕೇಂದ್ರಗಳು ಪ್ರತಿದಿನ ೧೦ ಲಕ್ಷ ಜನರಿಗೆ ಸೇವೆ ಸಲ್ಲಿಸುತ್ತಿದೆ. ಶೇಕಡ ೫೦ ರಿಂದ ೯೦ ರಷ್ಟು ಕಡಿಮೆ ಬೆಲೆಯಲ್ಲಿ ಉತ್ತಮ ಗುಣಮಟ್ಟದ ಔಷಧಗಳನ್ನು ಒದಗಿಸುತ್ತಿವೆ ಎಂದರು. ಈ ಉಪಕ್ರಮವು ಜನರಿಗೆ ಕೈಗೆಟಕುವ ಬೆಲೆಯಲ್ಲಿ ಔಷಧಗಳನ್ನು ಒದಗಿಸುವ ಜೊತೆಗೆ ಪ್ರತಿಯೊಬ್ಬ ಭಾರತೀಯನಿಗೂ ಅಗತ್ಯ ಆರೋಗ್ಯ ಸೇವೆ ಲಭ್ಯವಾಗುವಂತೆ ಮಾಡುತ್ತಿದೆ ಎಂದು ಸಚಿವ ಜೆ.ಪಿ.ನಡ್ಡಾ ಹೇಳಿದ್ದಾರೆ.

ಧ್ವನಿ: ಸಚಿವ ಜೆ.ಪಿ.ನಡ್ಡಾ ( ೩೦ ಸೆಕೆಂಡ್‌ಗಳು)

ಪ್ರಧಾನಮಂತ್ರಿ ಭಾರತೀಯ ಜನೌಷಧ ಪರಿಯೋಜನೆಯು ಕೋಟ್ಯಾಂತರ ಜನರ ಜೀವನವನ್ನು ಸುಧಾರಿಸುವ ಮೂಲಕ ಆರೋಗ್ಯ ಕ್ಷೇತ್ರದಲ್ಲಿ ಒಂದು ವರದಾನವಾಗಿದೆ ಎಂಬುದು ಸಾಬೀತಾಗಿದೆ ಎಂದು ಕೇಂದ್ರ ಆರೋಗ್ಯ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಾಟೀಲ್ ಪ್ರತಿಪಾದಿಸಿದ್ದಾರೆ.

<><*<><>*><>

ಬಜೆಟ್ ಕುರಿತ ಸಂವಾದ ರಾತ್ರಿ ೮ ಗಂಟೆಗೆ ಪ್ರಸಾರವಾಗಲಿದ್ದು, ಅತಿಥಿಗಳಾಗಿ ಆರ್ಥಿಕ ತಜ್ಞರಾದ ಶರಣ್ ಪಾಟೀಲ್ ಭಾಗವಹಿಸಲಿದ್ದಾರೆ. ಸಂವಾದವನ್ನು ಹಿರಿಯ ಪತ್ರಕರ್ತರಾದ ನಾರಾಯಣಸ್ವಾಮಿ ಬಿ.ಎಸ್. ನಡೆಸಿಕೊಡಲಿದ್ದಾರೆ.

<><*<><>*><>

ಭಾರತ ಮತ್ತು ಐರ್ಲೆಂಡ್ ಬಲವಾದ ವ್ಯಾಪಾರ ಸಂಬಂಧವನ್ನು ಹೊಂದಿವೆ. ೨ ದೇಶಗಳ ಪ್ರಮುಖ ಕಂಪನಿಗಳು ಪರಸ್ಪರ ರಾಷ್ಟ್ರಗಳ ಆರ್ಥಿಕತೆಯಲ್ಲಿ ಅಸ್ತಿತ್ವವನ್ನು ಸ್ಥಾಪಿಸಿವೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ. ಐರ್ಲೆಂಡ್‌ನ ಡಬ್ಲಿಂಗ್

ವಿಶ್ವವಿದ್ಯಾಲಯದಲ್ಲಿ ನಡೆದ ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಅವರು, ಭಾರತವು ಪ್ರಸ್ತುತ ಜಗತ್ತಿನ ಐದನೇ ಅತಿ ದೊಡ್ಡ ಆರ್ಥಿಕತೆಯಾಗಿದೆ. ಈ ದಶಕದ ಅಂತ್ಯದೊಳಗೆ ಮೂರನೇ ಅತಿ ದೊಡ್ಡ ಆರ್ಥಿಕತೆಯಾಗಲಿದೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು.

<><*<><>*><>

ಮುಂದಿನ ಪೀಳಿಗೆಯನ್ನು ಕೃತಕಬುದ್ಧಿಮತ್ತೆ-ಎಐ ಚಾಲಿತ ಕೈಗಾರಿಕೆಗಳಿಗೆ ಸಿದ್ಧಪಡಿಸುವಲ್ಲಿ ಉದ್ಯಮ-ಶೈಕ್ಷಣಿಕ ಸಹಯೋಗದ ಮಹತ್ವವನ್ನು ಕೇಂದ್ರ ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಒತ್ತಿ ಹೇಳಿದ್ದಾರೆ. ನವದೆಹಲಿಯಲ್ಲಿಂದು ನಡೆದ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ದೇಶಾದ್ಯಂತ ೨೪೦ ವಿಶ್ವವಿದ್ಯಾಲಯಗಳು ಅನೇಕ ಜಾಗತಿಕ ಸಂಸ್ಥೆಗಳಿಂದ ಎಐ ಮತ್ತು ಸೆಮಿಕಂಡಕ್ಟರ್ ವಿನ್ಯಾಸ ಪರಿಕರಗಳನ್ನು ಹೊಂದಿವೆ ಎಂದರು. ವಿದ್ಯಾರ್ಥಿಗಳು ಉದ್ಯಮದ ಅಗತ್ಯಗಳಿಗೆ ಸಂಬಂಧಿಸಿದ ಪ್ರಾಯೋಗಿಕ ಅನುಭವಗಳೊಂದಿಗೆ ಪದವಿ ಪಡೆಯುವುದನ್ನು ಖಚಿತಪಡಿಸಿಕೊಳ್ಳಲು ಇಂತಹ ಉಪಕ್ರಮಗಳನ್ನು ಅಳವಡಿಸಿಕೊಳ್ಳುವಂತೆ ಶಿಕ್ಷಣ ಸಂಸ್ಥೆಗಳಿಗೆ ಸಚಿವ ಅಶ್ವಿನಿ ವೈಷ್ಣವ್ ಕರೆ ನೀಡಿದ್ದಾರೆ. ಭಾರತವು ತನ್ನದೇ ಆದ ತಂತ್ರಜ್ಞಾನ ಮತ್ತು ಉತ್ಪನ್ನಗಳನ್ನು ಅಭಿವೃದ್ಧಿಪಡಿಸಬೇಕು. ವಿಶ್ವದ ಅಗ್ರ ಐದು ತಂತ್ರಜ್ಞಾನ ರಾಷ್ಟ್ರಗಳಲ್ಲಿ ಸ್ಥಾನ ಪಡೆಯಬೇಕು ಎಂದು ಹೇಳಿದರು. ದೇಶದಲ್ಲಿ ಐದು ಸೆಮಿಕಂಡಕ್ಟರ್ ಘಟಕಗಳು ನಿರ್ಮಾಣ ಹಂತದಲ್ಲಿವೆ. ಈ ವರ್ಷ, ಮೊದಲ 'ಮೇಡ್ ಇನ್ ಇಂಡಿಯಾ ಚಿಪ್' ಮಾರುಕಟ್ಟೆಗೆ ಬರಲಿದೆ ಎಂದು ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ಅವರು ಈ ತಿಂಗಳ ೧೧ ರಿಂದ ಎರಡು ದಿನಗಳ ಕಾಲ ಮಾರಿಷಸ್‌ಗೆ ಭೇಟಿ ನೀಡಲಿದ್ದಾರೆ. ಈ ಕುರಿತು ನವದೆಹಲಿಯಲ್ಲಿಂದು ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಮಾರ್ಚ್ ೧೨ ರಂದು ನಡೆಯಲಿರುವ ಮಾರಿಷಸ್‌ನ ರಾಷ್ಟ್ರೀಯ ದಿನಾಚರಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು. ಭಾರತೀಯ ನೌಕಾಪಡೆಯ ಹಡಗಿನೊಂದಿಗೆ ಭಾರತೀಯ ರಕ್ಷಣಾ ಪಡೆಗಳ ತುಕಡಿಯು ಇದರಲ್ಲಿ ಭಾಗವಹಿಸಲಿದೆ. ಭೇಟಿಯ ಸಮಯದಲ್ಲಿ, ಪ್ರಧಾನಿ ನರೇಂದ್ರ ಮೋದಿ, ಮಾರಿಷಸ್ ಅಧ್ಯಕ್ಷರು ಮತ್ತು ಮಾರಿಷಸ್ ಪ್ರಧಾನಿಯನ್ನು ಭೇಟಿ ಮಾಡಲಿದ್ದಾರೆ. ಜೊತೆಗೆ ಮಾರಿಷಸ್‌ನ ಪ್ರಮುಖ ಗಣ್ಯರು ಮತ್ತು ಹಿರಿಯ ನಾಯಕರೊಂದಿಗೆ ಸಭೆಗಳನ್ನು ನಡೆಸಲಿದ್ದಾರೆ ಎಂದು ಅವರು ಮಾಹಿತಿ ನೀಡಿದರು.

<><*<><>*><>

ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ೨೦೨೭ ರವೇಳೆಗೆ ದೇಶವನ್ನು ವಿಶ್ವದ ಮೂರನೇ ಅತಿದೊಡ್ಡ ಆರ್ಥಿಕತೆಯನ್ನಾಗಿ ಮಾಡಲಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಪ್ರತಿಪಾದಿಸಿದ್ದಾರೆ. ತಮಿಳನಾಡಿನ ಥಕ್ಕೋಲಂನಲ್ಲಿ ನಡೆದ ಸಿಐಎಸ್‌ಎಫ್‌ನ ೫೬ನೇ ಸಂಸ್ಥಾಪನಾ ದಿನದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಸಿಐಎಸ್‌ಎಫ್ ಎಂದಿಗೂ ದೇಶದ ಅಭಿವೃದ್ಧಿಯ ಭಾಗವಾಗಿದ್ದು, ದೇಶದ ಜನರನ್ನು ರಕ್ಷಿಸುವ ಮೂಲಕ ಪ್ರಮುಖ ಕೊಡುಗೆ ನೀಡುತ್ತಿದೆ ಎಂದು ಹೇಳಿದರು. ರಾಷ್ಟ್ರ ಅಭಿವೃದ್ಧಿಯಲ್ಲಿ ತಮಿಳುನಾಡು ಪ್ರಮುಖ ಪಾತ್ರ ವಹಿಸಿದ್ದು, ಸರ್ಕಾರ ಚೋಳ

ಸಾಮ್ರಾಜ್ಯದ ರಾಜಾದಿತ್ಯ ಚೋಳನ್ ಅವರ ಶೌರ್ಯವನ್ನು ಗುರುತಿಸಿದ್ದು, ಸಿಐಎಸ್‌ಎಫ್ ಪ್ರಾದೇಶಿಕ ತರಬೇತಿ ಕೇಂದ್ರಕ್ಕೆ ಅವರ ಹೆಸರನ್ನು ನಾಮಕರಣ ಮಾಡಲಾಗಿದೆ ಎಂದು ಗೃಹ ಸಚಿವರು ಹೇಳಿದರು.

<><*<><>*><>

ಉತ್ತರಪ್ರದೇಶ ಲಖನೌದ ಭಾರತ ರತ್ನ ಅಟಲ್ ಬಿಹಾರಿ ವಾಜಪೇಯಿ ಏಕನಾ ಕ್ರೀಡಾಂಗಣದಲ್ಲಿ ಇಂದು ನಡೆಯುತ್ತಿರುವ ಮಹಿಳಾ ಪ್ರೀಮಿಯರ್ ಲೀಗ್-ಡಬ್ಲ್ಯುಪಿಲ್ ಕ್ರಿಕೆಟ್ ಪಂದ್ಯದಲ್ಲಿಂದು ಗುಜರಾತ್ ಜೈಂಟ್ಸ್ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿಯಾಗಿವೆ. ಟಾಸ್ ಗೆದ್ದ ಗುಜರಾತ್ ಜೈಂಟ್ಸ್ ತಂಡ, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ ಸೆನ್ಸೆಕ್ಸ್ ೭ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೪ ಸಾವಿರದ ೩೩೨ ಅಂಕಗಳು ದಾಖಲಾಗಿದೆ. ಇದೇ ವೇಳೆ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ ೮ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೨ ಸಾವಿರದ ೫೫೨ ಅಂಕಗಳು ದಾಖಲಾಗಿದೆ. ವಿದೇಶಿ ವಿನಿಮಯ ಮಾರುಕಟ್ಟೆಯಲ್ಲಿಂದು ಅಮೆರಿಕನ್ ಡಾಲರ್ ಎದುರು ಭಾರತೀಯ ರೂಪಾಯಿ ಮೌಲ್ಯ ೮೬ ರೂಪಾಯಿ ೮೮ ಪೈಸೆಯಷ್ಟಾಗಿದೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೩೫ ಕ್ಕೆ <>*><>